**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**02.03.2026 07.35 a.m.**

**<><><><>**

ಮುಖ್ಯಾಂಶಗಳು

1. ಇರಾನ್-ಇಸ್ರೇಲ್-ಅಮೆರಿಕ ಸಂಘರ್ಷ: ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ಭದ್ರತೆ ಕುರಿತ ಸಂಪುಟ ಸಮಿತಿ ಸಭೆ
2. ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್‌ನ ಪ್ರಧಾನ ಕಚೇರಿ ಮೇಲೆ ಅಮೆರಿಕ ಸೇನೆ ದಾಳಿ
3. ರೈತರ ಹಿತದೃಷ್ಟಿಯಿಂದ ಎರಡು ಪ್ರಮುಖ ಸುಧಾರಣೆ ಜಾರಿಗೆ ತರಲು ಸಜ್ಜಾದ ಕೇಂದ್ರ ಸರ್ಕಾರ
4. ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್: ವೆಸ್ಟ್ ಇಂಡೀಸ್ ಮಣಿಸಿ ಸೆಮಿಫೈನಲ್‌ಗೆ ಲಗ್ಗೆಯಿಟ್ಟ ಭಾರತ

<><><><>

ಪ್ರಧಾನಿ ನರೇಂದ್ರ ಮೋದಿ ಅವರು ನಿನ್ನೆ ತಮ್ಮ ನಿವಾಸದಲ್ಲಿ ನಡೆದ ಭದ್ರತೆ ಕುರಿತ ಸಂಪುಟ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಕೇಂದ್ರ ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ವಿದೇಶಾಂಗ ಸಚಿವ ಎಸ್.ಜೈಶಂಕರ್ ಮತ್ತು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಭದ್ರತೆ ಮತ್ತು ಕಾರ್ಯತಂತ್ರದ ವ್ಯವಹಾರಗಳ ಕುರಿತು ದೇಶದ ಉನ್ನತ ನಿರ್ಧಾರ ತೆಗೆದುಕೊಳ್ಳುವ ಸಂಸ್ಥೆಯಾದ ಸಿಸಿಎಸ್‌ನಲ್ಲಿ ಭಾಗವಹಿಸಿದ್ದರು. ಹೆಚ್ಚುತ್ತಿರುವ ಇರಾನ್-ಇಸ್ರೇಲ್-ಅಮೆರಿಕ ಸಂಘರ್ಷದಿಂದ ಉದ್ಭವಿಸಿರುವ ವೇಗವಾಗಿ ವಿಕಸನಗೊಳ್ಳುತ್ತಿರುವ ಜಾಗತಿಕ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಈ ಸಭೆ ನಡೆಯಿತು.

<><><><>

ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಪರಿಸ್ಥಿತಿಯ ಕುರಿತು ಚರ್ಚಿಸಲು ಪ್ರಧಾನಿ ನರೇಂದ್ರ ಮೋದಿ ಅವರು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರೊಂದಿಗೆ ದೂರವಾಣಿ ಸಂಭಾಷಣೆ ನಡೆಸಿದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ, ಇತ್ತೀಚಿನ ಬೆಳವಣಿಗೆಗಳ ಬಗ್ಗೆ ಭಾರತದ ಕಳವಳ ಹಾಗೂ ನಾಗರಿಕರ ಸುರಕ್ಷತೆಯನ್ನು ಆದ್ಯತೆಯಾಗಿ

ಇರಿಸುವ ಕುರಿತು ತಿಳಿಸಲಾಗಿದೆ. ಯುದ್ಧವನ್ನು ಶೀಘ್ರ ನಿಲ್ಲಿಸುವ ಅಗತ್ಯವನ್ನು ಭಾರತ ಪುನರುಚ್ಚರಿಸುತ್ತದೆ ಎಂದು ಹೇಳಿದ್ದಾರೆ.

<><><><>

ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್‌ನ ಪ್ರಧಾನ ಕಚೇರಿಯ ಮೇಲೆ ದೊಡ್ಡ ಪ್ರಮಾಣದ ದಾಳಿ ನಡೆಸಿ ಧ್ವಂಸಗೊಳಿಸಿರುವುದಾಗಿ ಅಮೆರಿಕ ಸೇನೆ ದೃಢಪಡಿಸಿದೆ. ಅಮೆರಿಕ ಸೇನೆಯು ಇರಾನಿನ ೯ ನೌಕಾ ಹಡಗುಗಳನ್ನು ನಾಶಪಡಿಸಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ. ಟ್ರೂತ್ ಸೋಶಿಯಲ್ ಪ್ಲಾಟ್‌ಫಾರ್ಮ್‌ನಲ್ಲಿ ಸಾರ್ವಜನಿಕ ಪೋಸ್ಟ್‌ನಲ್ಲಿ ಅವರು ಈ ವಿಷಯ ತಿಳಿಸಿದ್ದಾರೆ. ಇರಾನ್‌ನ ಉಳಿದ ನೌಕಾ ಹಡಗುಗಳನ್ನು ಅಮೆರಿಕ ಬೆನ್ನಟ್ಟುತ್ತಿದೆ ಮತ್ತು ಅವು ಶೀಘ್ರದಲ್ಲೇ ಧ್ವಂಸವಾಗಲಿದೆ ಎಂದು ಟ್ರಂಪ್ ಎಚ್ಚರಿಸಿದ್ದಾರೆ. ಐಆರ್‌ಜಿಸಿ, ಗುಪ್ತಚರ ಪ್ರಧಾನ ಕಚೇರಿ, ಐಆರ್‌ಜಿಸಿ ವಾಯುಪಡೆಯ ಕಮಾಂಡ್ ಕೇಂದ್ರಗಳು ಮತ್ತು ಆಂತರಿಕ ಭದ್ರತಾ ಪ್ರಧಾನ ಕಚೇರಿ ಸೇರಿದಂತೆ ಇರಾನಿನ ಹಲವು ಮಿಲಿಟರಿ ಕಮಾಂಡ್ ಕೇಂದ್ರಗಳ ಮೇಲೆ ದಾಳಿ ನಡೆಸಿರುವುದಾಗಿ ಇಸ್ರೇಲ್ ಸೇನೆ ತಿಳಿಸಿದೆ. ಈ ದಾಳಿಗಳು ಇರಾನ್‌ನ ಕಮಾಂಡ್-ಅಂಡ್-ಕಂಟ್ರೋಲ್ ಸಾಮರ್ಥ್ಯಗಳಿಗೆ ತೀವ್ರ ಹೊಡೆತ ನೀಡಿವೆ. ಇದರ ಪರಿಣಾಮವಾಗಿ ಇರಾನ್‌ನ ಅನೇಕ ಯೋಧರು ಮೃತಪಟ್ಟಿದ್ದಾರೆ ಎಂದು ಇಸ್ರೇಲ್ ಸೇನೆ ಮಾಹಿತಿ ನೀಡಿದೆ. ಶನಿವಾರ ಇರಾನ್‌ನ ಸರ್ವೋಚ್ಚ ನಾಯಕ ಅಯತೊಲ್ಲಾ ಅಲಿ ಖಮೇನಿ ಹತ್ಯೆಯ ನಂತರ, ಅಮೆರಿಕ-ಇಸ್ರೇಲ್ ಜಂಟಿ ಕಾರ್ಯಾಚರಣೆಗಳು ನಿನ್ನೆಯೂ ಮುಂದುವರೆಯಿತು. ನಿನ್ನೆ ರಾತ್ರಿ ಟೆಹ್ರಾನ್‌ನ ಹಲವು ಸ್ಥಳಗಳಲ್ಲಿ ಅಮೆರಿಕ ಮತ್ತು ಇಸ್ರೇಲ್ ಪಡೆಗಳು ದಾಳಿ ನಡೆಸಿವೆ. ಇದಕ್ಕೆ ಪ್ರತಿಯಾಗಿ ಇಸ್ರೇಲ್, ಗಲ್ಫ್ ಪ್ರದೇಶದಲ್ಲಿನ ಅಮೆರಿಕ ಮಿಲಿಟರಿ ನೆಲೆಗಳು, ಸೌದಿ ರಾಜಧಾನಿ ರಿಯಾದ್ ಮತ್ತು ದುಬೈ ಮೇಲೆ ಕ್ಷಿಪಣಿಗಳು ಮತ್ತು ಡ್ರೋನ್‌ಗಳಿಂದ ಇರಾನ್ ದಾಳಿ ನಡೆಸಿದೆ.

<><><><>

ರೈತರ ಹಿತದೃಷ್ಟಿಯಿಂದ ಕೇಂದ್ರ ಸರ್ಕಾರ ಎರಡು ಪ್ರಮುಖ ಸುಧಾರಣೆಗಳನ್ನು ಜಾರಿಗೆ ತರಲು ಸಜ್ಜಾಗಿದೆ. ಇವುಗಳಲ್ಲಿ ಹೊಸ ಬೀಜ ಕಾಯ್ದೆ ಮತ್ತು ಪರಿಷ್ಕೃತ ಕೀಟ ನಾಶಕ ಕಾಯ್ದೆ ಸೇರಿವೆ ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ಉತ್ತರಾಖಂಡದ ಮಸ್ಸೂರಿಯಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಸಚಿವರು, ಕೇಂದ್ರ ಸರ್ಕಾರ

ಪ್ರಮುಖ ಡಿಜಿಟಲ್ ವೇದಿಕೆಯನ್ನು ನವೀಕರಿಸುತ್ತಿದೆ. "ಏಕ್ ಭಾರತ್" ಉಪಕ್ರಮದಡಿಯಲ್ಲಿ, ರೈತರು ಎಲ್ಲಾ ಅಗತ್ಯ ಮಾಹಿತಿಯನ್ನು ಒಂದೇ ಸ್ಥಳದಲ್ಲಿ ಪ್ರವೇಶಿಸಲು ಅನುವು ಮಾಡಿಕೊಡಲು ಕೃತಕ ಬುದ್ಧಿಮತ್ತೆ ಆಧಾರಿತ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಲಾಗಿದೆ. ಇದು ಕೃಷಿ ಉತ್ಪಾದನೆ ಹೆಚ್ಚಾಗುತ್ತದೆ ಮತ್ತು ರೈತರ ಆದಾಯ ಸುಧಾರಿಸುತ್ತದೆ ಎಂದು ಮಾಹಿತಿ ನೀಡಿದ್ದಾರೆ. ತಂತ್ರಜ್ಞಾನ ಮತ್ತು ಬಲವಾದ ಶಾಸನದ ಮೂಲಕ ರೈತರನ್ನು ಸಬಲೀಕರಣಗೊಳಿಸುವ ಗುರಿಯನ್ನು ಕೇಂದ್ರ ಸರ್ಕಾರ ಹೊಂದಿದೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ.

<><><><>

ಪ್ರಧಾನಿ ನರೇಂದ್ರ ಮೋದಿ ಮತ್ತು ಕೆನಡಾದ ಪ್ರಧಾನಿ ಮಾರ್ಕ್ ಕಾರ್ನಿ ಇಂದು ನವದೆಹಲಿಯ ಹೈದರಾಬಾದ್ ಹೌಸ್‌ನಲ್ಲಿ ನಿಯೋಗ ಮಟ್ಟದ ಮಾತುಕತೆ ನಡೆಸಲಿದ್ದಾರೆ. ಭಾರತ-ಕೆನಡಾ ಕಾರ್ಯತಂತ್ರದ ಪಾಲುದಾರಿಕೆಯ ವಿವಿಧ ಕ್ಷೇತ್ರಗಳಲ್ಲಿ ಇಲ್ಲಿಯವರೆಗೆ ಸಾಧಿಸಿರುವ ಪ್ರಗತಿಯನ್ನು ಇಬ್ಬರೂ ನಾಯಕರು ಪರಿಶೀಲಿಸಲಿದ್ದಾರೆ. ವ್ಯಾಪಾರ ಮತ್ತು ಹೂಡಿಕೆ, ಇಂಧನ, ನಿರ್ಣಾಯಕ ಖನಿಜಗಳು, ಕೃಷಿ, ಶಿಕ್ಷಣ, ಸಂಶೋಧನೆ ಮತ್ತು ನಾವೀನ್ಯತೆ ಹಾಗೂ ಜನರಿಂದ ಜನರ ನಡುವಿನ ಸಂಬಂಧಗಳು ಸೇರಿದಂತೆ ಪ್ರಮುಖ ಕ್ಷೇತ್ರಗಳಲ್ಲಿ ನಡೆಯುತ್ತಿರುವ ಸಹಕಾರವನ್ನು ಅವರು ಪರಿಶೀಲಿಸಲಿದ್ದಾರೆ. ಪ್ರಾದೇಶಿಕ ಮತ್ತು ಜಾಗತಿಕ ಬೆಳವಣಿಗೆಗಳ ಕುರಿತು ಇಬ್ಬರು ನಾಯಕರು ತಮ್ಮ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ. ಪ್ರಧಾನಿ ಮೋದಿ ಮತ್ತು ಪ್ರಧಾನಿ ಕಾರ್ನಿ ಇಂದು ಮಧ್ಯಾಹ್ನ ಭಾರತ-ಕೆನಡಾ ಸಿಇಒಗಳ ಸಂವಾದದಲ್ಲಿ ಭಾಗವಹಿಸಲಿದ್ದಾರೆ. ಕಳೆದ ವರ್ಷ ಮಾರ್ಚ್‌ನಲ್ಲಿ ಅಧಿಕಾರ ವಹಿಸಿಕೊಂಡ ಪ್ರಧಾನಿ ಮಾರ್ಕ್ ಕಾರ್ನಿ ಭಾರತಕ್ಕೆ ತಮ್ಮ ಮೊದಲ ಪೂರ್ಣಪ್ರಮಾಣದ ದ್ವಿಪಕ್ಷೀಯ ಭೇಟಿಯಲ್ಲಿದ್ದಾರೆ. ಪರಮಾಣು ಶಕ್ತಿಯ ಶಾಂತಿಯುತ ಬಳಕೆಯಲ್ಲಿ ಎರಡೂ ದೇಶಗಳು ಸಹಕರಿಸುತ್ತವೆ. ಈ ಸಹಕಾರವು ಪರಸ್ಪರ ನಂಬಿಕೆಯನ್ನು ಪ್ರತಿಬಿಂಬಿಸುತ್ತದೆ ಮತ್ತು ಭಾರತದ ಇಂಧನ ಭದ್ರತೆ ಹಾಗೂ ಶುದ್ಧ ಇಂಧನ ಉದ್ದೇಶಗಳಿಗೆ ಕೊಡುಗೆ ನೀಡುತ್ತದೆ. ಜೊತೆಗೆ ದ್ವಿಪಕ್ಷೀಯ ವೈಜ್ಞಾನಿಕ ಮತ್ತು ತಾಂತ್ರಿಕ ಸಂಬಂಧವನ್ನು ಬಲಪಡಿಸುತ್ತದೆ.

<><><><>

ವಿದ್ಯಾರ್ಥಿಗಳಲ್ಲಿ ಶಿಕ್ಷಣವು ವಿಮರ್ಶಾತ್ಮಕ ಚಿಂತನೆ, ಸಹಾನುಭೂತಿ ಮತ್ತು ಸಮಗ್ರತೆಯಂತಹ ಗುಣಗಳನ್ನು ಬೆಳೆಸಬೇಕು ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹೇಳಿದ್ದಾರೆ. ಕೇರಳದ

ಪಠಾಣಪುರಂನಲ್ಲಿರುವ ಸೇಂಟ್ ಸ್ಟೀಫನ್ಸ್ ಹೈಯರ್ ಸೆಕೆಂಡರಿ ಶಾಲೆಯ ಶತಮಾನೋತ್ಸವ ಸಮಾರಂಭ ಉದ್ಘಾಟಿಸಿ ನಿನ್ನೆ ಮಾತನಾಡಿದ ಅವರು, ಮಾದಕ ದ್ರವ್ಯ ದುರುಪಯೋಗದ ವಿರುದ್ಧ ಜಾಗೃತಿ ಮೂಡಿಸುವುದು ಜನಾಂದೋಲನವಾಗಬೇಕು ಎಂದು ಸಲಹೆ ನೀಡಿದರು.

<><><><>

ಅಮೆರಿಕದ ಟೆಕ್ಸಾಸ್‌ನ ಆಸ್ಟಿನ್‌ನ ಜನಪ್ರಿಯ ಬಾರ್‌ನವೊಂದರಲ್ಲಿ ನಿನ್ನೆ ನಡೆದ ಗುಂಡಿನ ದಾಳಿಯಲ್ಲಿ ಮೂವರು ಸಾವನ್ನಪ್ಪಿದ್ದು, ೧೪ ಮಂದಿ ಗಾಯಗೊಂಡಿದ್ದಾರೆ. ಪೊಲೀಸರು ನಡೆಸಿದ ಕಾರ್ಯಾಚರಣೆಯಲ್ಲಿ ಬಂದೂಕುಧಾರಿ ಕೂಡ ಹತನಾಗಿದ್ದಾನೆ. ಫೆಡರಲ್ ಬ್ಯೂರೋ ಆಫ್ ಇನ್ವೆಸ್ಟಿಗೇಷನ್-ಎಫ್‌ಬಿಐ, ಭಯೋತ್ಪಾದನಾ ದಾಳಿಯ ತನಿಖೆಯನ್ನು ಕೈಗೊಂಡಿದೆ. ಶಂಕಿತನನ್ನು ಎನ್‌ಡಿಯಾಗಾ ಡಿಯಾಗ್ನೆ ಎಂದು ಗುರುತಿಸಲಾಗಿದೆ. ಆರೋಪಿ ಸೆನೆಗಲ್‌ನಲ್ಲಿ ಜನಿಸಿದ್ದು, ಅಮೆರಿಕದ ನಾಗರಿಕತ್ವ ಪಡೆದಿದ್ದಾನೆ. ೫೩ ವರ್ಷದ ಈತ ೨೦೦೬ರಲ್ಲಿ ಅಮೆರಿಕಕ್ಕೆ ಆಗಮಿಸಿದ್ದು, ೨೦೧೩ರಲ್ಲಿ ಪೌರತ್ವ ಪಡೆದಿದ್ದಾನೆ. ಟೆಕ್ಸಾಸ್‌ಗೆ ಸ್ಥಳಾಂತರಗೊಳ್ಳುವ ಮೊದಲು ಈತ ನ್ಯೂಯಾರ್ಕ್‌ನಲ್ಲಿ ಕೆಲಕಾಲ ವಾಸಿಸಿದ್ದ ಎಂದು ತನಿಖಾಧಿಕಾರಿಗಳು ತಿಳಿಸಿದ್ದಾರೆ.

<><><><>

ಕೋಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ನಿನ್ನೆ ರಾತ್ರಿ ನಡೆದ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಗೆಲ್ಲಲೇಬೇಕಾದ ಪಂದ್ಯದಲ್ಲಿ ವೆಸ್ಟ್ ಇಂಡೀಸ್ ತಂಡವನ್ನು ಭಾರತ ೫ ವಿಕೆಟ್‌ಗಳಿಂದ ಸೋಲಿಸಿ ಸೆಮಿಫೈನಲ್‌ಗೆ ಲಗ್ಗೆಯಿಟ್ಟಿತು. ವೆಸ್ಟ್ ಇಂಡೀಸ್ ನೀಡಿದ್ದ ೧೯೬ ರನ್‌ಗಳ ಗುರಿಯನ್ನು ಬೆನ್ನಟ್ಟಿದ ಭಾರತ ತಂಡ, ಸಂಜು ಸ್ಯಾಮ್ಸನ್ ಅವರ ಅಜೇಯ ೯೭ ರನ್‌ಗಳ ಸಹಾಯದಿಂದ ೪ ಎಸೆತಗಳು ಬಾಕಿ ಇರುವಾಗಲೇ ಗುರಿಯನ್ನು ಬೆನ್ನಟ್ಟಿತು. ಇದಕ್ಕೂ ಮೊದಲು, ಬ್ಯಾಟಿಂಗ್ ಮಾಡಿದ ವೆಸ್ಟ್ ಇಂಡೀಸ್ ನಿಗದಿತ ೨೦ ಓವರ್‌ಗಳಲ್ಲಿ ೪ ವಿಕೆಟ್‌ಗಳ ನಷ್ಟಕ್ಕೆ ೧೯೫ ರನ್ ಗಳಿಸಿತು. ರೋಸ್ಟನ್ ಚೇಸ್ ೪೦ ರನ್ ಗಳಿಸಿದರು. ಭಾರತ ಪರ ಜಸ್ಪ್ರೀತ್ ಬುಮ್ರಾ ೨ ವಿಕೆಟ್‌ಗಳನ್ನು ಕಬಳಿಸಿದರು. ಸಂಜು ಸ್ಯಾಮ್ಸನ್ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಗುರುವಾರ ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ನಡೆಯಲಿರುವ ಎರಡನೇ ಸೆಮಿಫೈನಲ್ ಪಂದ್ಯದಲ್ಲಿ ಭಾರತ ತಂಡ, ಇಂಗ್ಲೆಂಡ್ ತಂಡವನ್ನು ಎದುರಿಸಲಿದೆ. ಅದಕ್ಕೂ ಮೊದಲು, ಬುಧವಾರ ಕೋಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ನಡೆಯಲಿರುವ ಮೊದಲ ಸೆಮಿಫೈನಲ್ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ತಂಡ, ನ್ಯೂಜಿಲೆಂಡ್ ವಿರುದ್ಧ ಸೆಣಸಲಿದೆ. ಈ ಎರಡೂ ಪಂದ್ಯಗಳ ವಿಜೇತರು ಮಾರ್ಚ್

೮ ರಂದು ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯುವ ಫೈನಲ್‌ನಲ್ಲಿ ಪರಸ್ಪರ ಮುಖಾಮುಖಿಯಾಗಲಿದ್ದಾರೆ.

<><><><>

ಈ ತಿಂಗಳ ೮ ರಿಂದ ೧೪ ರವರೆಗೆ ನಡೆಯಲಿರುವ ಎಫ್‌ಐಹೆಚ್ ವಿಶ್ವಕಪ್ ಹಾಕಿ ೨೦೨೬ ರ ಅರ್ಹತಾ ಪಂದ್ಯಗಳಿಗಾಗಿ ಭಾರತೀಯ ಮಹಿಳಾ ಹಾಕಿ ತಂಡ ಹೈದರಾಬಾದ್‌ಗೆ ಆಗಮಿಸಿದೆ. ಬೆಂಗಳೂರಿನಲ್ಲಿ ಒಂದು ತಿಂಗಳ ಕಾಲ ನಡೆದ ತರಬೇತಿ ಶಿಬಿರದ ನಂತರ ಆತಿಥೇಯ ಭಾರತ ತಂಡ ಹೈದರಾಬಾದ್‌ಗೆ ಆಗಮಿಸಿದೆ. ಸ್ಕಾಟ್ಲೆಂಡ್, ಉರುಗ್ವೆ ಮತ್ತು ವೇಲ್ಸ್ ತಂಡಗಳೊಂದಿಗೆ ಭಾರತ 'ಬಿ' ಗುಂಪಿನಲ್ಲಿದೆ. ಭಾರತ ತಂಡ ಇದೇ ೮ರಂದು ಉರುಗ್ವೆ ವಿರುದ್ಧ ತನ್ನ ಅಭಿಯಾನವನ್ನು ಪ್ರಾರಂಭಿಸಲಿದ್ದು, ನಂತರ ೯ರಂದು ಸ್ಕಾಟ್ಲೆಂಡ್ ಮತ್ತು ಇದೇ ೧೧ ರಂದು ವೇಲ್ಸ್ ವಿರುದ್ಧ ಪಂದ್ಯಗಳನ್ನು ಆಡಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>